ಮಧ್ಯಂತರ ಅರ್ಜಿ ಆದೇಶದ ಮೇರೆಗೆ ಸಾಕ್ಷಿಯನ್ನು ದಿನಾಂಕಃ**-11-02-2025**ರಂದು ಪುನಃ ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ**- 3**ನೇ ಎದುರುದಾರರ ಪರ ವಕೀಲರಿಂದಃ**-**

ಅರ್ಜಿದಾರನಿಗೆ ನಮ್ಮ ಆಸ್ಪತ್ರೆಯಿಂದ ಗಾಯದ ಪ್ರಮಾಣ ಪತ್ರ ನೀಡಿದ್ದೇವೆ ಎಂದರೆ ಸರಿ. ಸದರಿ ಗಾಯದ ಪ್ರಮಾಣ ಪತ್ರದಲ್ಲಿ ಅರ್ಜಿದಾರನ ವಯಸ್ಸು 23 ವರ್ಷ ಎಂದು ನಮೂದಿಸಿದೆ ಎಂದರೆ ಸರಿ. ಗಾಯಾಳು ಅಥವಾ ರೋಗಿ ಹೇಳಿದ ಆಧಾರದ ಮೇಲೆ ವಯಸ್ಸನ್ನು ನಮೂದಿಸುತ್ತೇವೆ ಎಂದರೆ ಸರಿ. ಅರ್ಜಿದಾರನ ವಯಸ್ಸು 30 ವರ್ಷ ಮೇಲ್ಪಟ್ಟು ಇದ್ದರೂ ಸಹ ಆತನಿಗೆ ಅನುಕೂಲ ಮಾಡಲು ಕಡಿಮೆ ವಯಸ್ಸನ್ನು ನಮೂದಿಸಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರ ಅಪಘಾತದ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ದಾಖಲಾಗಿದ್ದರು. ದಿನಾಂಕ 30-09-2022 ರಂದು ನಮ್ಮ ಆಸ್ಪತ್ರೆಗೆ ದಾಖಲಾಗಿದ್ದರು. ಅಪಘಾತದ ಹಿನ್ನೆಲೆಯಲ್ಲಿ ಗಾಯಾಳು ಆಸ್ಪತ್ರೆಗೆ ಬಂದಾಗ ಗಾಯದ ಹಿನ್ನೆಲೆಯನ್ನು ತಿಳಿದುಕೊಂಡು ಎಂ ಎಲ್ ಸಿ

ನೋಂದಣಿ ಮಾಡಿಕೊಂಡು, ಅದೇ ದಿನ ಪೋಲಿಸರಿಗೆ ತಿಳಿಸುತ್ತೇವೆ. ಎಂ ಎಲ್ ಸಿ ಆದ ನಂತರ ಪೋಲಿಸರು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳು ಹೇಳಿಕೆ ಕೊಡುವ ಸ್ಥಿತಿಯಲ್ಲಿ ಇದ್ದಾರೋ ಇಲ್ಲವೋ ಎಂದು ಕೇಳುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ಈ ಕೇಸಿನಲ್ಲಿ ನೆನಪಿಲ್ಲ ಎಂದು ಹೇಳುತ್ತಾರೆ. ನಾನು ಯಾವುದೇ ಶಸ್ತ್ರಚಿಕಿತ್ಸೆ ಮಾಡಿಲ್ಲ ಎಂದರೆ ಸರಿಯಲ್ಲ. ಗಾಯಾಳುವಿಗೆ ಸಣ್ಣ ಪುಟ್ಟ ಗಾಯಗಳು ಆಗಿದ್ದವು ಎಂದರೆ ಸರಿಯಲ್ಲ. ಅರ್ಜಿದಾರನು ನಮ್ಮ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ ನಂತರ ಮುಂದುವರೆದ ಚಿಕಿತ್ಸೆಯನ್ನು ಯಾವ ದಿನಾಂಕದಂದು ತೆಗೆದುಕೊಂಡಿದ್ದಾನೆ ಎಂದು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಮತ್ತು ಅಂಗನ್ಯೂನ್ಯತಾ ಪ್ರಮಾಣ ಪತ್ರದಲ್ಲಿ ನಮೂದಿಸಿಲ್ಲ ಎಂದರೆ ಸರಿ. ಅಂಗನ್ಯೂನ್ಯತಾ ಪ್ರಮಾಣ ಪತ್ರ ಕೊಡುವ ಮುಂಚೆ ನಾನು ಅರ್ಜಿದಾರನನ್ನು ಕ್ಲಿನಿಕಲ್ ಪರೀಕ್ಷೆಗೆ ಒಳಪಡಿಸಿಲ್ಲ ಅನ್ನುವುದು ಸರಿಯಲ್ಲ. ಅರ್ಜಿದಾರನಿಗೆ ನಡೆದಾಡಲು, ಓಡಾಡಲು, ಮೆಟ್ಟಿಲು ಹತ್ತಲು ಮತ್ತು ಕುಳಿತುಕೊಳ್ಳಲು ತೊಂದರೆ ಇದೆ ಎಂದು ಸುಳ್ಳು ನಮೂದಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಕೊಟ್ಟಂತಹ ಅಂಗನ್ಯೂನ್ಯತೆ ಎಡಗಾಲಿಗೆ ಮಾತ್ರ ಸಂಬಂಧಿಸಿದ್ದು ಎಂದರೆ ಸರಿ. ಅರ್ಜಿದಾರನಿಗೆ ಅನುಕೂಲವಾಗಲು ನಿಪಿ-10 ರಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಅಂಗನ್ಯೂನ್ಯತೆಯನ್ನು ತೋರಿಸಿದ್ದೇನೆ ಎಂದರೆ ಸರಿಯಲ್ಲ.

ಇನ್ನುಳಿದ ಪಾಟೀಸವಾಲನ್ನು 2ನೇ ಎದುರುದಾರರ ಪರ ವಕೀಲರು ಮಾಡಿದ ಪಾಟೀಸವಾಲನ್ನು ಅಳವಡಿಸಿಕೊಳ್ಳುವುದಾಗಿ ಹೇಳುತ್ತಾರೆ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)
ಓ. ಹೇ. ಕೇ. ಸರಿ ಅದೆ.

ಸಹಿ/-
ಸದಸ್ಯರು ಮೋ.ವಾ.ಅ. ಮಂಡಳಿ-5,
ಜಮಖಂಡಿ.